**ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,**
**ತಿ ನರಸೀಪುರ**
**<u>ಸಿ ಸಿ ಸಂಖ್ಯೆ: 290/2024</u>**

**<u>ದೋಷಾರೋಪಣೆ</u>**

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್‌ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ಟಿ ನರಸೀಪುರ ಆದ ನಾನು

1. ನಾಗರಾಜು ಬಿನ್ ಚಿಕ್ಕಮಾದಯ್ಯ
   42 ವರ್ಷ.

2. ನಿರ್ಮಲ ಕೋಂ ನಾಗರಾಜು
   35 ವರ್ಷ.

   ಇಬ್ಬರ ವಾಸಃ ಹ್ಯಾಕನೂರು ಗ್ರಾಮ,
   ತಿ ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಎಂಬ ಆರೋಪಿತರಾದ ನಿಮ್ಮ ಮೇಲೆ ಈ ಕೆಳಗಿನಂತೆ ಹೊರಿಸುವ ದೋಷಾರೋಪ ಎನೆಂದರೆ :-

ಮೊದಲನೆಯದಾಗಿ, ದಿನಾಂಕ 27.03.2024 ಮಧ್ಯಾಹ್ನ 12.30 ಗಂಟೆ ಸಮಯದಲ್ಲಿ, ತಿ.ನರಸೀಪುರ ಪೊಲೀಸ್ ಠಾಣಾ ವ್ಯಾಪ್ತಿಯ, ತಿ. ನರಸೀಪುರ ತಾಲ್ಲೂಕಿನ ಹ್ಯಾಕನೂರು ಗ್ರಾಮದ ಪರಿಶಿಷ್ಟ ಜನಾಂಗದ ಬೀದಿಯ ಲೇಟ್ ಮಲ್ಲಯ್ಯರವರ ಮನೆಯ ಮುಂದೆ, ಹಳೇಯ ದ್ವೇಷದ ಹಿನ್ನೆಲೆಯಲ್ಲಿ, ಸಮಾನ ಉದ್ದೇಶದಿಂದ, 1ನೇ ಆರೋಪಿತರಾದ ನೀವು ಚಾಸಾ-1/ಗಿರೀಶ್ ರವರ ಜೊತೆ ತೀಟೆ ಜಗಳ ತೆಗೆದು ಅವರನ್ನು ಉದ್ದೇಶಿಸಿ, "ಸೂಳೇ ಮಗನೆ, ಗುಂಡಿ ನೀನೆ ಮಚ್ಚಿದ್ದು" ಎಂಬ ಅವ್ಯಾಚ್ಯ ಶಬ್ದಗಳಿಂದ ಬೈದು

ಸಾರ್ವಜನಿಕ ನೆಮ್ಮದಿಗೆ ಭಂಗ ಉಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ಸಹ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಎರಡನೇಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಸಮಾನ ಉದ್ದೇಶದಿಂದ, 2ನೇ ಆರೋಪಿತರಾದ ನೀವು ಚಾಸಾ-1 ರವರಿಗೆ ಕಾಲಿನಿಂದ ಒದ್ದು ಅವರಿಗೆ ಸಾಮಾನ್ಯ ಸ್ವರೂಪದ ನೋವುಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಮೂರನೇಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಸಮಾನ ಉದ್ದೇಶದಿಂದ, 1ನೇ ಆರೋಪಿತರಾದ ನೀವು ಗುದ್ದಲಿ ಕಾವಿನಿಂದ ಚಾಸಾ-1ರವರ ಬಲಗೈಗೆ ಹೊಡೆದು ತೀವ್ರ ಸ್ವರೂಪದ ಗಾಯವುಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 326 ಸಹ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ನಾಲ್ಕನೇಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಸಮಾನ ಉದ್ದೇಶದಿಂದ, ಆರೋಪಿತರಾದ ನೀವು ಚಾಸಾ-1 ರವರಿಗೆ ಕೊಲೆ ಮಾಡುವುದಾಗಿ ಪ್ರಾಣ ಬೆದರಿಕೆ ಉಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ಸಹ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಐದನೇಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಸಮಾನ ಉದ್ದೇಶದಿಂದ, 2ನೇ ಆರೋಪಿತರಾದ ನೀವು ಚಾಸಾ–1 ರವರನ್ನು ಸಾಯಿಸುವಂತೆ 1ನೇ ಆರೋಪಿಗೆ ಪ್ರಚೋದನೆ ನೀಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 114 ಸಹ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ನಾನು ಈ ಮೇಲಿನ ದೋಷಾರೋಪಣೆಗಳ ಮೇಲೆ ಈ ನ್ಯಾಯಾಲಯದ ವಿಚಾರಣೆಗೆ ನೀವು ಗುರಿಯಾಗಬೇಕೆಂದು ನಿರ್ದೇಶಿಸುತ್ತೇನೆ.

ದಿನಾಂಕಃ 10.10.2025.

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ, ಟಿ ನರಸೀಪುರ**

ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,

ತಿ ನರಸೀಪುರ

ಸಿ ಸಿ ಸಂಖ್ಯೆ **290/2024**

**ದೋಷಾರೋಪಣೆ**

1. ನಾಗರಾಜು ಬಿನ್ ಚಿಕ್ಕಮಾದಯ್ಯ
   42 ವರ್ಷ.

2. ನಿರ್ಮಲ ಕೋಂ ನಾಗರಾಜು
   35 ವರ್ಷ.

ಇಬ್ಬರ ವಾಸಃ ಹ್ಯಾಕನೂರು ಗ್ರಾಮ,
ತಿ ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಪ್ರಶ್ನೆಃ ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?
ಉತ್ತರಃ ಹೌದು

ಪ್ರಶ್ನೆಃ ನೀವು ಸದರಿ ದೋಷಾರೋಪವನ್ನು ಒಪ್ಪಿಕೊಳ್ಳುತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರಃ ವಿಚಾರಣೆಯಾಗಬೇಕು

(ಮೇಲಿನ ದೋಷಾರೋಪಣೆಯನ್ನು ಆಪಾದಿತರಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

ದಿನಾಂಕ 10.10.2025

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ, ಟಿ ನರಸೀಪುರ**